ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 25–06–2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | **Farewell address by chairman, Karnataka State Bar Council Bengaluru.**<br>**Participants:**<br>**Shri Justice M. Kumar, Judge, High Court of Karnataka** | **27-06-2016 Monday at 2-00 PM.** | **Principal Bench, Court Hall No. 1, High Court of Karnataka, Bengaluru.** |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ಎಲ್ಲಾ ಕ್ಷೇತ್ರಗಳಲ್ಲಿ ಮಹಿಳೆಯರಿಗೆ ಶೇ 50 ರಷ್ಟು ಮೀಸಲಾತಿ

## –ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು, ಜೂನ್ 25 (ಕರ್ನಾಟಕ ವಾರ್ತೆ)

ಎಲ್ಲಾ ಕ್ಷೇತ್ರಗಳಲ್ಲಿ ಮಹಿಳೆಯರಿಗೂ ಸಹ ಶೇ 50 ರಷ್ಟು ಮೀಸಲಾತಿಯನ್ನು ಕಲ್ಪಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಅವರು ಇಂದು ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ನಡೆದ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಹಮ್ಮಿಕೊಂಡಿದ್ದ ರಾಷ್ಟ್ರೀಯ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿ. ಸಮಾಜದಲ್ಲಿ ಜಾತಿ ವ್ಯವಸ್ಥೆ

ಇರುವವರೆಗೂ ಮೀಸಲಾತಿ ಸಹ ಇರಬೇಕು. ಸ್ಥಳೀಯ ಸಂಸ್ಥೆಗಳ ರೀತಿ ವಿಧಾನಸಭೆ ಹಾಗೂ ಲೋಕಸಭೆ ಚುನಾವಣೆಗಳಲ್ಲೂ ಸಹ ಮೀಸಲಾತಿಯನ್ನು ಜಾರಿಗೊಳಿಸುವಂತಾಗಬೇಕೆಂದು ಅವರು ಅಭಿಪ್ರಾಯಪಟ್ಟರು.

ರಾಜ್ಯದಲ್ಲಿ ಜಾತಿ ಸಮೀಕ್ಷೆ ಕಾರ್ಯವು ಪ್ರಗತಿಯಲ್ಲಿದ್ದು, ಸದ್ಯದಲ್ಲೇ ತನ್ನ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಿದೆ ಎಂದ ಮುಖ್ಯಮಂತ್ರಿಗಳು ಸರ್ವರಿಗೂ ಸಮಾನತೆಯನ್ನು ತರಲು ಸಮೀಕ್ಷೆಯ ಆಧಾರದ ಮೇಲೆ ರಾಜ್ಯ ಸರ್ಕಾರವು ಹೊಸ ಮೀಸಲಾತಿ ನೀತಿಯನ್ನು ತರುವಲ್ಲಿ ಸಹಾಯವಾಗುತ್ತದೆ ಎಂದರು. ಇಂತಹ ರಾಷ್ಟ್ರೀಯ ವಿಚಾರ ಸಂಕಿರಣಗಳಲ್ಲಿ ಗಣ್ಯರು ಮಂಡಿಸುವ ವಾದಗಳನ್ನು ಸಹ ಪರಿಗಣಿಸಲಾಗುವುದು. ಜಾತಿ ಸಮೀಕ್ಷೆ ವರದಿಯನ್ನು ಸಾರ್ವಜನಿಕರ ಅಭಿಪ್ರಾಯ ಪಡೆದು ಸಮಾಜ ಏಳಿಗ್ಗೆಗಾಗಿ ಹೊಸ ನೀತಿಯನ್ನು ಜಾರಿಗೆ ತರಬಹುದಾಗಿದೆ ಎಂದರು.

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಹೆಚ್. ಕಾಂತರಾಜ ಮಾತನಾಡಿ ಇಂದಿನ ವಿಚಾರ ಸಂಕಿರಣದಲ್ಲಿ ದೇಶದ ನಾನಾ ಭಾಗದ ಗಣ್ಯರು ಪಾಲ್ಗೊಂಡಿದ್ದು, ಅವರು ಮಂಡಿಸುವ ವಿಷಯಗಳನ್ನು ಆಯೋಗವು ಪರಿಗಣನೆಗೆ ತೆಗೆದುಕೊಳ್ಳಲಿದೆ. ಆಯೋಗವು ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ಜಾತಿ ಸಮೀಕ್ಷೆಯ ವರದಿ ಸಂಪೂರ್ಣಗೊಂಡ ನಂತರ ತನ್ನ ಅಭಿಪ್ರಾಯವನ್ನು ಸರ್ಕಾರಕ್ಕೆ ಸಲ್ಲಿಸಲಿದೆ ಎಂದರು.

ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಹೆಚ್.ಆಂಜನೇಯ ವಿಚಾರ ಸಂಕಿರಣದ ಅಧ್ಯಕ್ಷತೆಯನ್ನುವಹಿಸಿ ಮಾತನಾಡಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಅತ್ಯುತ್ತಮವಾಗಿ ಕೆಲಸ ನಿರ್ವಹಿಸುತ್ತಿದ್ದು, ಅನ್ಯಾಯಕ್ಕೊಳಗಾದವರಿಗೆ ನ್ಯಾಯ ಒದಗಿಸುವುದೇ ಸರ್ಕಾರದ ಮುಖ್ಯಗುರಿ. ಮುಂದಿನ ವಿಧಾನಸಭೆ ಅಧಿವೇಶನದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಲೋಕೋಪಯೋಗಿ ಇಲಾಖೆಯ ಕಾಮಗಾರಿಗಳಲ್ಲಿ ಮೀಸಲಾತಿಯನ್ನು ತರುವಲ್ಲಿ ಹೆಚ್ಚಿನ ಒತ್ತು ನೀಡಲಾಗುವುದು ಎಂದರು.

ನಿವೃತ್ತ ನ್ಯಾಯಮೂರ್ತಿ ಎಂ.ಎನ್. ವೆಂಕಟಾಚಲಯ್ಯ ಸೇರಿದಂತೆ ಇನ್ನಿತರರು ವಿಚಾರ ಸಂಕಿರಣದಲ್ಲಿ ತಮ್ಮ ವಿಷಯಗಳನ್ನು ಮಂಡಿಸಿದರು.

ಬಾಬು:ಜೆಡಿ:ಜೆಪಿಆರ್.

## ಮಕ್ಕಳ ಕಲ್ಯಾಣ ಕ್ಷೇತ : ರಾಜ್ಯ ಪ್ರಶಸ್ತಿಗೆ ನಾಮನಿರ್ದೇಶನಮಾಡಿ

ಬೆಂಗಳೂರು, ಜೂನ್ 25 (ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರವು ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 5 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವಂತಹ ವ್ಯಕ್ತಿಗಳಿಗೆ ತಲಾ ರೂ.25,000/- ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಹಾಗೂ ಸಂಸ್ಥೆಗಳಿಗೆ ತಲಾ ರೂ 1.00 ಲಕ್ಷಗಳ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರವನ್ನು ಮಕ್ಕಳ ದಿನಾಚರಣೆಯೆಂದು ಪ್ರದಾನ ಮಾಡಿ ಗೌರವಿಸುತ್ತದೆ.

2016 ನೇ ಸಾಲಿನ ಪ್ರಶಸ್ತಿಗಾಗಿ ನಿಗದಿಪಡಿಸಿರುವ ಅರ್ಜಿ ನಮೂನೆಗಳನ್ನು ಸಂಬಂಧಿಸಿದ ಜಿಲ್ಲೆಯ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇವರಿಂದ ಪಡೆದು ಭರ್ತಿಮಾಡಿದ ಅರ್ಜಿಗಳನ್ನು ದ್ವಿ ಪ್ರತಿಯಲ್ಲಿ ಸಂಬಂಧಪಟ್ಟ ಜಿಲ್ಲೆಯ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರಿಗೆ ಆಗಸ್ಟ್ 12 ರೊಳಗೆ ಸಲ್ಲಿಸತಕ್ಕದ್ದು. ನಿಗದಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. ಅರ್ಜಿಗಳನ್ನು ಕನ್ನಡ ಭಾಷೆಯಲ್ಲಿಯೇ ಸಲ್ಲಿಸತಕ್ಕದ್ದು.

ಬಾಬು:ಜಿಪಿಆರ್.

# ಉದ್ಯಾನ ವನದಲ್ಲಿ ಉದಯರಾಗ

ಬೆಂಗಳೂರು, ಜೂನ್ 25 (ಕರ್ನಾಟಕ ವಾರ್ತೆ)

ಬಾಲ ಭವನವು ತೋಟಗಾರಿಕೆ ಇಲಾಖೆಯ ಸಹಯೋಗದೊಂದಿಗೆ ಪ್ರತಿ ಭಾನುವಾರಗಳಂದು "ಉದ್ಯಾನದಲ್ಲಿ ಉದಯರಾಗ" ಕಾರ್ಯಕ್ರಮವನ್ನು ಹಮ್ಮಿಕೊಳ್ಳುತ್ತಾ ಬಂದಿದೆ.

05-16 ವರ್ಷದ ಮಕ್ಕಳಲ್ಲಿ ಹುದುಗಿರುವ ಸುಪ್ತ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸಲು ಅನುವಾಗುವಂತೆ, ಕಬ್ಬನ್ ಉದ್ಯಾನವನದ 'ಬ್ಯಾಂಡ್ ಸ್ಟ್ಯಾಂಡ್' ನಲ್ಲಿ " ಉದ್ಯಾನದಲ್ಲಿ ಉದಯರಾಗ" ಶೀರ್ಷಿಕೆಯಡಿ ಮಕ್ಕಳಿಗೆ ಹಾಗೂ ಮಕ್ಕಳ ನೃತ್ಯ ಸಂಗೀತ ಸಂಸ್ಥೆಗಳಿಗೆ ಪ್ರತಿಭೆಯನ್ನು ಪ್ರದರ್ಶಿಸಲು ಅವಕಾಶ ಕಲ್ಪಿಸುವುದರೊಂದಿಗೆ, ಪ್ರದರ್ಶನ ನೀಡುವ ಮಕ್ಕಳಿಗೆ ಉಚಿತ ವೇದಿಕೆ ಹಾಗೂ ಮಕ್ಕಳ ಕಲಾ ಸಂಸ್ಥೆಗಳಿಗೆ ಪ್ರೋತ್ಸಾಹ ಧನ ನೀಡಿ ಗೌರವಿಸಲಾಗುತ್ತದೆ.

2016-17 ನೇ ಸಾಲಿನಲ್ಲೂ ಕಾರ್ಯಕ್ರಮ ಮುಂದುವರೆಸಲು ಉದ್ದೇಶಿಸಿ, ಜುಲೈ - 2016 ರಿಂದ ಮಾರ್ಚ್ 2017 ರವರೆಗೆ ಬೆಳಿಗ್ಗೆ 8.00 ರಿಂದ 9.00 ಗಂಟೆವರೆಗೆ ಪ್ರತಿ ಭಾನುವಾರಗಳಂದು ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳ ಪ್ರದರ್ಶನ ಏರ್ಪಡಿಸಲು ಅನುವಾಗುವಂತೆ, ವಿವಿಧ ಕಲಾ ಸಂಸ್ಥೆಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತರು, ಹೆಚ್ಚಿನ ಮಾಹಿತಿಗಾಗಿ ಹಾಗೂ ನೋಂದಣೆಗಾಗಿ ಕಾರ್ಯದರ್ಶಿಗಳ ಕಚೇರಿ, ಬಾಲ ಭವನ, ಕಬ್ಬನ್ ಉದ್ಯಾನವನ, ಬೆಂಗಳೂರು, ಇಲ್ಲಿ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080 - 22861423/22864189 ಮೂಲಕ ಸಂಪರ್ಕಿಸಲು ಕೋರಿದೆ.

ಬಾಬು:ಜಿಪಿಆರ್.

# Field of Child Welfare : Application Invited

**Bengaluru, June 25th (Karnataka Information)**

**Government of Karnataka confers award to individuals and institutions who have worked for the welfare of children for more than 5 years. Individual award caries cash prize Rs. 25,000/- and acitation and Institutional award carries cash prize of Rs 1.00 lakh and a citation.**

**The prescribed forms for the year 2016 may be obtained from the Deputy Director of Women and Child Development Department in the respective districts. The filled applications should be submitted to the concerned District Deputy Director of Women & Child Development Department on or before 12.08.2016. The applications received after due date will not be considered. The applications should be submitted in kannada only.**

**babu:gpr**

**ಕರ್ನಾಟಕ ಸರ್ಕಾರ**
**ಕಂದಾಯ ಇಲಾಖೆ**

**ಪತ್ರಿಕಾ ಪ್ರಕಟಣೆ**

**ಸಂಖ್ಯೆ: ಕಂಇ 17 ಭೂಸ್ವಾಬೆ 2016** **ದಿನಾಂಕ:24-06-2016**

ಸರ್ಕಾರದ ಆದೇಶ ಸಂಖ್ಯೆ: ಕಂಇ 17 ಭೂಸ್ವಾಬೆ 2016, ದಿನಾಂಕ 18-06-2016ರನ್ವಯ ನೀರಾವರಿ ಯೋಜನೆಗಳನ್ನು ಹೊರತುಪಡಿಸಿ, ರಾಷ್ಟ್ರೀಯ ಯೋಜನೆಗಳಾದ ರೈಲ್ವೆ, ರಾಷ್ಟ್ರೀಯ ಹೆದ್ದಾರಿ ಮತ್ತು ವಿಮಾನನಿಲ್ದಾಣ ಯೋಜನೆಗಳಿಗೆ ಸಂಬಂಧಿಸಿದ ಭೂಸ್ವಾಧೀನ ಪ್ರಕರಣಗಳನ್ನು ನಿರ್ವಹಿಸಲು ಖಾಲಿ ಇರುವ ಭೂಸ್ವಾಧೀನಾಧಿಕಾರಿಗಳ ಹುದ್ದೆಗಳಿಗೆ ತಾತ್ಕಾಲಿಕವಾಗಿ ನಿವೃತ್ತ ಕೆ.ಎ.ಎಸ್., ಹಿರಿಯ/ಕಿರಿಯ ಶ್ರೇಣಿಯ ಅಧಿಕಾರಿಗಳನ್ನು ಈ ಕೆಳಕಂಡ ಷರತ್ತು ಹಾಗೂ ನಿಬಂಧನೆಗಳಿಗೆ ಒಳಪಡಿಸಿ ನೇಮಕ ಮಾಡಿಕೊಳ್ಳಲು ಸರ್ಕಾರವು ಇಚ್ಚಿಸಿರುತ್ತದೆ. ಆದ್ದರಿಂದ ಕೆಳಕಂಡ ಅರ್ಹತೆಯುಳ್ಳ ಆಸಕ್ತಿಯುಳ್ಳ ನಿವೃತ್ತ ಹಿರಿಯ/ಕಿರಿಯ ಶ್ರೇಣಿ ಅಧಿಕಾರಿಗಳು ಕೆಳಗಿನ ವಿಳಾಸಕ್ಕೆ ತಮ್ಮ ಸ್ವ-ವಿವರಗಳೊಂದಿಗೆ ಅಗತ್ಯ ದಾಖಲಾತಿಗಳನ್ನು ಆಯುಕ್ತರು, ರಾಜ್ಯ ಪುನರ್ವಸತಿ ಮತ್ತು ಪುನರ್ ನಿರ್ಮಾಣ ಹಾಗೂ ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ, ಕಂದಾಯ ಇಲಾಖೆ, ಕೊಠಡಿ ಸಂಖ್ಯೆ:540, 5ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1 ಇವರಿಗೆ ಸಲ್ಲಿಸಬಹುದು.

**ಅರ್ಹತೆಗಳು:**

1) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.
2) ಭೂಸ್ವಾಧೀನಕ್ಕೆ ಸಂಬಂಧಿಸಿದ ವಿಷಯದಲ್ಲಿ ಕಾರ್ಯನಿರ್ವಹಿಸಲು ಸಮರ್ಥ ಹಾಗೂ ಆಸಕ್ತಿ ಉಳ್ಳವರಾಗಿರಬೇಕು.
3) ಸೇವಾವಧಿಯಲ್ಲಿ ಯಾವುದೇ ಶಿಸ್ತುಕ್ರಮಕ್ಕೆ ಒಳಗಾಗಿರಬಾರದು.
4) ನಿವತ್ತಿಯಾದ ಮೂರು ವರ್ಷದ ಒಳಗಿನ ಹಿರಿಯ/ಕಿರಿಯ ಶ್ರೇಣಿಯ ನಿವೃತ್ತ ಕೆ.ಎ.ಎಸ್. ಅಧಿಕಾರಿಗಳು ಮಾತ್ರ ಅರ್ಜಿ ಸಲ್ಲಿಸಲು ಅವಕಾಶವಿದೆ.

**ವಿಶೇಷ ಸೂಚನೆ:**

1) ಈ ಹಿಂದೆ ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ಕಾರ್ಯನಿರ್ವಹಿಸಿದ್ದಲ್ಲಿ ಅದರ ಸಂಕ್ಷಿಪ್ತ ಮಾಹಿತಿ ನೀಡುವುದು.

ಸಹಿ/-
ಆಯುಕ್ತರು,
ರಾಜ್ಯ ಪುನರ್ವಸತಿ ಮತ್ತು ಪುನರ್ ನಿರ್ಮಾಣ ಹಾಗೂ
ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ,
ಕಂದಾಯ ಇಲಾಖೆ.

ಕರ್ನಾಟಕ ಸರ್ಕಾರ
ಕಂದಾಯ ಇಲಾಖೆ

**ಪತ್ರಿಕಾ ಪ್ರಕಟಣೆ**

**ಸಂಖ್ಯೆ: ಕಂಇ 17 ಭೂಸ್ವಾಬೆ 2016** **ದಿನಾಂಕ:24-06-2016**

ಸರ್ಕಾರದ ಆದೇಶ ಸಂಖ್ಯೆ: ಕಂಇ 17 ಭೂಸ್ವಾಬೆ 2016, ದಿನಾಂಕ 18-06-2016ರನ್ವಯ ನೀರಾವರಿ ಯೋಜನೆಗಳನ್ನು ಹೊರತುಪಡಿಸಿ, ರಾಷ್ಟ್ರೀಯ ಯೋಜನೆಗಳಾದ ರೈಲ್ವೆ, ರಾಷ್ಟ್ರೀಯ ಹೆದ್ದಾರಿ ಮತ್ತು ವಿಮಾನನಿಲ್ದಾಣ ಯೋಜನೆಗಳಿಗೆ ಸಂಬಂಧಿಸಿದ ಭೂಸ್ವಾಧೀನ ಪ್ರಕರಣಗಳನ್ನು ನಿರ್ವಹಿಸಲು ಖಾಲಿ ಇರುವ ಭೂಸ್ವಾಧೀನಾಧಿಕಾರಿಗಳ ಹುದ್ದೆಗಳಿಗೆ ತಾತ್ಕಾಲಿಕವಾಗಿ ನಿವೃತ್ತ ಕೆ.ಎ.ಎಸ್., ಹಿರಿಯ/ಕಿರಿಯ ಶ್ರೇಣಿಯ ಅಧಿಕಾರಿಗಳನ್ನು ಈ ಕೆಳಕಂಡ ಷರತ್ತು ಹಾಗೂ ನಿಬಂಧನೆಗಳಿಗೆ ಒಳಪಡಿಸಿ ನೇಮಕ ಮಾಡಿಕೊಳ್ಳಲು ಸರ್ಕಾರವು ಇಚ್ಛಿಸಿರುತ್ತದೆ. ಆದ್ದರಿಂದ ಕೆಳಕಂಡ ಅರ್ಹತೆಯುಳ್ಳ ಆಸಕ್ತಿಯುಳ್ಳ ನಿವೃತ್ತ ಹಿರಿಯ/ಕಿರಿಯ ಶ್ರೇಣಿ ಅಧಿಕಾರಿಗಳು ಕೆಳಗಿನ ವಿಳಾಸಕ್ಕೆ ತಮ್ಮ ಸ್ವ-ವಿವರಗಳೊಂದಿಗೆ ಅಗತ್ಯ ದಾಖಲಾತಿಗಳನ್ನು ಆಯುಕ್ತರು, ರಾಜ್ಯ ಪುನರ್ವಸತಿ ಮತ್ತು ಪುನರ್ ನಿರ್ಮಾಣ ಹಾಗೂ ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ, ಕಂದಾಯ ಇಲಾಖೆ, ಕೊಠಡಿ ಸಂಖ್ಯೆ:540, 5ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1 ಇವರಿಗೆ ಸಲ್ಲಿಸಬಹುದು.

**ಅರ್ಹತೆಗಳು:**

1) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.
2) ಭೂಸ್ವಾಧೀನಕ್ಕೆ ಸಂಬಂಧಿಸಿದ ವಿಷಯದಲ್ಲಿ ಕಾರ್ಯನಿರ್ವಹಿಸಲು ಸಮರ್ಥ ಹಾಗೂ ಆಸಕ್ತಿ ಉಳ್ಳವರಾಗಿರಬೇಕು.
3) ಸೇವಾವಧಿಯಲ್ಲಿ ಯಾವುದೇ ಶಿಸ್ತುಕ್ರಮಕ್ಕೆ ಒಳಗಾಗಿರಬಾರದು.
4) ನಿವೃತ್ತಿಯಾದ ಮೂರು ವರ್ಷದ ಒಳಗಿನ ಹಿರಿಯ/ಕಿರಿಯ ಶ್ರೇಣಿಯ ನಿವೃತ್ತ ಕೆ.ಎ.ಎಸ್. ಅಧಿಕಾರಿಗಳು ಮಾತ್ರ ಅರ್ಜಿ ಸಲ್ಲಿಸಲು ಅವಕಾಶವಿದೆ.

**ವಿಶೇಷ ಸೂಚನೆ:**

1) ಈ ಹಿಂದೆ ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ಕಾರ್ಯನಿರ್ವಹಿಸಿದ್ದಲ್ಲಿ ಅದರ ಸಂಕ್ಷಿಪ್ತ ಮಾಹಿತಿ ನೀಡುವುದು.

ಸಹಿ/-
ಆಯುಕ್ತರು,
ರಾಜ್ಯ ಪುನರ್ವಸತಿ ಮತ್ತು ಪುನರ್ ನಿರ್ಮಾಣ ಹಾಗೂ
ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ,
ಕಂದಾಯ ಇಲಾಖೆ.